# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 13 ಸೇನಿಸೇ 2011

ಕರ್ನಾಟಕ ಸರ್ಕಾರ ಸಚಿವಾಲಯ
2ನೇ ಮಹಡಿ, ವಿಧಾನಸೌಧ
ಬೆಂಗಳೂರು, ದಿನಾಂಕ: 17.05.2012

## ಅಧಿಕೃತ ಜ್ಞಾಪನ

**ವಿಷಯ:** ಮಧ್ಯಂತರ ಪರಿಹಾರವನ್ನು ಗಳಿಕೆ ರಜೆ ನಗದೀಕರಣಕ್ಕಾಗಿ ಪರಿಗಣಿಸುವ ಬಗ್ಗೆ ಸ್ಪಷ್ಟೀಕರಣ.

**ಉಲ್ಲೇಖ:** ದಿನಾಂಕ:18.11.2011ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 39 ಎಸ್‌ಆರ್‌ಪಿ 2011.

*****

ಮೇಲ್ಕಂಡ ಉಲ್ಲೇಖದ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ದಿನಾಂಕ:01.11.2011ರಿಂದ ಜಾರಿಗೆ ಬರುವಂತೆ ಅವರ ಮೂಲ ವೇತನದ ಶೇ 15ರಷ್ಟು ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲಾಗಿದೆ.

ಮೇಲ್ಕಂಡ ಉಲ್ಲೇಖದ ಆದೇಶದಲ್ಲಿ ಮಂಜೂರು ಮಾಡಿರುವ ಮಧ್ಯಂತರ ಪರಿಹಾರವನ್ನು ಎರಡು ವರ್ಷಗಳ ಬ್ಲಾಕ್ ಅವಧಿಯಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118ರನ್ವಯ ನೀಡುವ ಗಳಿಕೆ ರಜೆ ನಗದೀಕರಣಕ್ಕಾಗಿ ಪರಿಗಣಿಸಬಹುದೇ ಎಂಬ ಬಗ್ಗೆ ಸ್ಪಷ್ಟೀಕರಣ ಕೋರಲಾಗಿದೆ.

**ಈ ಅಂಶಗಳನ್ನು ಪರಿಶೀಲಿಸಿ, ಈ ಕೆಳಕಂಡಂತೆ ಸ್ಪಷ್ಟೀಕರಣವನ್ನು ನೀಡಲಾಗಿದೆ:**

1. ಮಧ್ಯಂತರ ಪರಿಹಾರವನ್ನು ಎರಡು ವರ್ಷಗಳ ಬ್ಲಾಕ್ ಅವಧಿಯಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ **118** ರನ್ವಯ ನೀಡುವ ಗಳಿಕೆ ರಜೆ ನಗದೀಕರಣಕ್ಕಾಗಿ ಪರಿಗಣಿಸಬಹುದು.

2. ಆದರೆ, ನಿವೃತ್ತಿ ಹೊಂದುತ್ತಿರುವ ಸರ್ಕಾರಿ ನೌಕರರಿಗೆ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ **118** ಎ ರನ್ವಯ ಅವರ ಹಕ್ಕಿನಲ್ಲಿರುವ ಗಳಿಕೆ ರಜೆ ನಗದೀಕರಣದ ಸೌಲಭ್ಯಕ್ಕಾಗಿ ಮಧ್ಯಂತರ ಪರಿಹಾರವನ್ನು ಲೆಕ್ಕಹಾಕುವಂತಿಲ್ಲ.

3. ಅಸಾಧಾರಣ ರಜೆ ಅಥವಾ ವೇತನರಹಿತ ರಜೆಯನ್ನು ಹೊರತುಪಡಿಸಿ, ರಜೆಯ ಸಂದರ್ಭದಲ್ಲಿಯೂ ಮಧ್ಯಂತರ ಪರಿಹಾರವು ಲಭ್ಯವಾಗುತ್ತದೆ.

(ಕೆ.ಎಸ್.ಗೋಪಾಲಕೃಷ್ಣ)
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು)

ಪ್ರತಿ:

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳಿಗೆ,
2. ಸರ್ಕಾರದ ಎಲ್ಲಾ ಕಾರ್ಯದರ್ಶಿಗಳು/ವಿಶೇಷ ಕಾರ್ಯದರ್ಶಿಗಳು/ ಅಪರ ಕಾರ್ಯದರ್ಶಿಗಳು/ಜಂಟಿ ಕಾರ್ಯದರ್ಶಿಗಳು/ಉಪಕಾರ್ಯದರ್ಶಿಗಳಿಗೆ ಹಾಗೂ ಅಧೀನ ಕಾರ್ಯದರ್ಶಿಗಳಿಗೆ,
3. ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು,
4. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ,
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ,
7. ಮಹಾಲೇಖಪಾಲರು (ಲೆಕ್ಕಪತ್ರ ಲೆಕ್ಕ ಪರಿಶೋಧನೆ, ಜಿ.ಎಂ.ಶಾಖೆ).
8. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು,
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು,
11. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು,
12. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್, ಬೆಂಗಳೂರು,
13. ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು,
14. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
15. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು,
16. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
17. ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ: ವಿಧಾನ ಮಂಡಲ ಗ್ರಂಥಾಲಯ.
18. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ (ಎಲ್ಲಾ ಜಿಲ್ಲಾ ಖಜಾನೆಗಳು.)
19. ವಾರಪತ್ರ.

[ಕ್ರಮ ಸಂಖ್ಯೆ: 7 ರಿಂದ 13 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ]

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ WWW.finance.kar.nic.in ವೀಕ್ಷಿಸಿ